# ಜಾಲಪ್ಪ ಕಾಲೇಜಿನಿಂದ ಭೂಮಿ ವಾಪಸಿಗೆ ಆಗ್ರಹ

**ಸಂ.ಕ ಸಮಾಚಾರ, ಕೋಲಾರ**

ಟಮಕದ ತೋಟಗಾರಿಕಾ ಕಾಲೇಜಿಗೆ ಸೇರಿದ ಸ.ನಂ.115ರ 10 ಎಕರೆ ಸರ್ಕಾರಿ ಜಮೀನನ್ನು ಜಾಲಪ್ಪ ಆಸ್ಪತ್ರೆಗೆ ನೀಡಿರುವುದನ್ನು ವಾಪಸ್ಸು ಪಡೆದು ರೈತರಿಗೆ ಅನುಕೂಲವಾಗುವ ಪ್ರಯೋಗಿಕ ಬೆಳೆ ತೆಗೆಯಲು ಬಳಸಬೇಕೆಂದು ಒತ್ತಾಯಿಸಿ ರೈತ ಸಂಘದಿಂದ ಗುರುವಾರ ಕಾಲೇಜಿನ ಎದುರು ಧರಣಿ ನಡೆಸಲಾಯಿತು.

ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ, ಜಿಲ್ಲಾಧ್ಯಕ್ಷ ಮರಗಲ್ ಶ್ರೀನಿವಾಸ್, ಮಹಿಳಾ ಜಿಲ್ಲಾಧ್ಯಕ್ಷೆ ಎ.ನಳಿನಿ, ಜಿಲ್ಲಾ ಸಂಚಾಲಕ ಕೆ.ಶ್ರೀನಿವಾಸಗೌಡ, ಜಿಲ್ಲಾಧ್ಯಕ್ಷ ಮರಗಲ್ ಶ್ರೀನಿವಾಸ್, ಬಂಗವಾದಿ ನಾಗರಾಜಗೌಡ, ಕ್ಯಾಸಂಬಳ್ಳಿ ಪ್ರತಾಪ್, ವಡ್ಡಹಳ್ಳಿ ಮಂಜುನಾಥ್, ತೆರ್ನಹಳ್ಳಿ ಆಂಜಿನಪ್ಪ, ಮಾಲುರು ತಾಲ್ಲೂಕು ಅಧ್ಯಕ್ಷ ಹೊಸಹಳ್ಳಿ ವೆಂಕಟೇಶ್. ಐತಂಡಹಳ್ಳಿ ಅಂಬರೀಶ್, ಉದಯ್, ಮಂಜುನಾಥ್, ಮೀಸೆ ವೆಂಕಟೇಶಪ್ಪ, ತೆರ್ನಹಳ್ಳಿ ವೆಂಕಿ, ಸಹದೇವಣ್ಣ, ಮಂಗಸಂದ್ರ ನಾಗೇಶ್, ತಿಮ್ಮಣ್ಣ, ವೆಂಕಟೇಶಪ್ಪ, ಪ್ರಸನ್ನಕುಮಾರ್, ಸಂತೋಷ್, ಪುರುಷೋತ್ತಮ್, ಹರೀಶ್, ಯಲ್ಲಪ್ಪ, ಮಣಿ, ನಿರಂಜನ್ ಭಾಗವಹಿಸಿದ್ದರು.

# ಜಾಲಪ್ಪರ ಶಿಕ್ಷಣ ಸಂಸ್ಥೆಗೆ ಜಮೀನು: ಧರಣಿ

ಪ್ರಜಾವಾಣಿ ವಾರ್ತೆ



ತೋಟಗಾರಿಕಾ ಮಹಾವಿದ್ಯಾಲಯದ ಜಮೀನನ್ನು ನಿಯಮಬಾಹಿರವಾಗಿ ಜಾಲಪ್ಪ ಆಸ್ಪತ್ರೆಗೆ ನೀಡಲಾಗಿದೆ ಎಂದು ಆರೋಪಿಸಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಸದಸ್ಯರು ಕೋಲಾರದಲ್ಲಿ ಗುರುವಾರ ಧರಣಿ ನಡೆಸಿದರು.

ಕೋಲಾರ: ತೋಟಗಾರಿಕಾ ಮಹಾವಿದ್ಯಾಲಯಕ್ಕೆ ಸೇರಿದ ಸರ್ಕಾರಿ ಜಮೀನನ್ನು ನಿಯಮಬಾಹಿರವಾಗಿ ಜಾಲಪ್ಪ ಆಸ್ಪತ್ರೆಗೆ ನೀಡಲಾಗಿದೆ ಎಂದು ಆರೋಪಿಸಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಸದಸ್ಯರು ಇಲ್ಲಿ ಗುರುವಾರ ಮಹಾವಿದ್ಯಾಲಯದ ಎದುರು ಧರಣಿ ನಡೆಸಿದರು.

'ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಡುಪಳ್ಳಿ ಗ್ರಾಮದ ಸರ್ವೆ ನಂಬರ್ 15ರಲ್ಲಿರುವ 10 ಎಕರೆ ಜಮೀನನ್ನು ಈ ಹಿಂದೆ ತೋಟಗಾರಿಕೆ ಇಲಾಖೆಯಿಂದ ತೋಟಗಾರಿಕೆ ಮಹಾವಿದ್ಯಾಲಯಕ್ಕೆ ಹಸ್ತಾಂತರಿಸಲಾಗಿತ್ತು. ಬಳಿಕ ಆ ಜಮೀನನ್ನು 99 ವರ್ಷದ ಅವಧಿಗೆ ಜಾಲಪ್ಪ ಆಸ್ಪತ್ರೆಗೆ ಗುತ್ತಿಗೆ ನೀಡಲಾಗಿದೆ' ಎಂದು ಧರಣಿನಿರತರು ಆರೋಪಿಸಿದರು.

'ಕೃಷಿ ನಂಬಿ ಜೀವನ ಸಾಗಿಸುತ್ತಿರುವ ಲಕ್ಷಾಂತರ ರೈತರು ಸರ್ಕಾರಗಳ ಅವೈಜ್ಞಾನಿಕ ನೀತಿ ಹಾಗೂ ಕಾರ್ಪೊರೇಟ್ ಕಂಪನಿಗಳ ರೈತ ವಿರೋಧಿ ಧೋರಣೆಯಿಂದ ಬೀದಿಗೆ ಬಿದ್ದಿದ್ದಾರೆ. ಅತಿವೃಷ್ಟಿ, ಅನಾವೃಷ್ಟಿಯಿಂದ ಬೆಳೆ ನಾಶವಾಗಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಸರ್ಕಾರಗಳು ಅಭಿವೃದ್ಧಿಯ ಸೋಗಿನಲ್ಲಿ ಕೃಷಿ ಜಮೀನು ಸ್ವಾಧೀನಪಡಿಸಿಕೊಂಡು ರೈತರನ್ನು ಬೀದಿ ಪಾಲು ಮಾಡುತ್ತಿವೆ' ಎಂದು ಸಂಘಟನೆಯ ರಾಜ್ಯ ಘಟಕದ ಉಪಾಧ್ಯಕ್ಷ ಕೆ.ನಾರಾಯಣಗೌಡ ದೂರಿದರು.

'ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿದು ತೋಟಗಾರಿಕಾ ಮಹಾವಿದ್ಯಾಲಯದ ಜಮೀನನ್ನು ಅಕ್ರಮವಾಗಿ ಜಾಲಪ್ಪರ ಶಿಕ್ಷಣ ಸಂಸ್ಥೆಗೆ ಕೊಟ್ಟಿದ್ದಾರೆ. ರೈತರ ತರಬೇತಿ ಹಾಗೂ ಮಕ್ಕಳ ಶಿಕ್ಷಣಕ್ಕೆ ಮೀಸಲಾದ ಮಹಾವಿದ್ಯಾಲಯದ ಜಮೀನು ಖಾಸಗಿಯವರ ಪಾಲಾಗಿದೆ. ಜಾಲಪ್ಪರ ಶಿಕ್ಷಣ ಸಂಸ್ಥೆಯು ವಂತಿಗೆ ರೂಪದಲ್ಲಿ ಬಡ ವಿದ್ಯಾರ್ಥಿಗಳ ಹಾಗೂ ಪೋಷಕರ ರಕ್ತ ಹೀರುತ್ತಿದೆ' ಎಂದು ಕಿಡಿಕಾರಿದರು.

**ಕರಾರು ರದ್ದುಪಡಿಸಿ:** 'ಗುತ್ತಿಗೆ ಕರಾರು ರದ್ದುಪಡಿಸಿ ಜಮೀನು ಹಿಂಪಡೆಯಬೇಕು. ಆ ಜಮೀನನ್ನು ರೈತರಿಗೆ ಅನುಕೂಲವಾಗುವ ತರಬೇತಿಗೆ, ಪ್ರಾಯೋಗಿಕ ಬೆಳೆಗಳಿಗೆ ಹಾಗೂ ಮಕ್ಕಳ ಶೈಕ್ಷಣಿಕ ಚಟುವಟಿಕೆಗೆ ಬಳಕೆ ಮಾಡಬೇಕು. ಎಂದು ಧರಣಿನಿರತರು ಎಚ್ಚರಿಕೆ ನೀಡಿದರು.

ಕೋಲಾರಪತ್ರಿಕೆ



# ಜಾಲಪ್ಪ ಆಸ್ಪತ್ರೆಗೆ ನೀಡಿರುವ ಜಮೀನು ವಾಪಸ್ ಪಡೆಯಲು ರೈತಸಂಘ ಆಗ್ರಹ




ಕೋಲಾರ ಅ ೧೭– ಟಮಕದ ತೋಟಗಾರಿಕಾ ಮಹಾವಿದ್ಯಾಲಯಕ್ಕೆ ಸೇರಿದ ಸರ್ಕಾರಿ ಜಮೀನನ್ನು ಖಾಸಗಿ ಮಾಲಿಕತ್ವದ ಜಾಲಪ್ಪ ಆಸ್ಪತ್ರೆ ಸ್ಥಾಪನೆಗೆ ನೀಡಿರುವ ಕಸಬಾ ಹೋಬಳಿ ನಡುಪಳ್ಳಿ ಸರ್ವೇ ನಂ.೧೧೫ರಲ್ಲಿ ೧೦ ಎಕರೆ ಜಮೀನನ್ನು ಕೂಡಲೇ ವಾಪಸ್ಸು ಪಡೆದು ರೈತರಿಗೆ ಅನುಕೂಲವಾಗುವ ಪ್ರಾಯೋಗಿಕ ಬೆಳೆಗಳಿಗೆ ಅಥವಾ ಸರ್ಕಾರಿ ಕಟ್ಟಡಗಳಿಗೆ ಉಪಯೋಗಿಸಲು ಒತ್ತಾಯಿಸಿ ರೈತಸಂಘದಿಂದ ತೋಟಗಾರಿಕೆ ಕಾಲೇಜಿನ ಮುಂದೆ ಪ್ರತಿಭಟನೆ ನಡೆಸಿ ಡೀನ್‌ರಿಗೆ ಮನವಿಯನ್ನು ಸಲ್ಲಿಸಲಾಯಿತು.

ರಾಜ್ಯ ಉಪಾಧ್ಯಕ್ಷ ಕೆ. ನಾರಾಯಣಗೌಡ, ಜಿಲ್ಲಾಧ್ಯಕ್ಷ ಶ್ರೀನಿವಾಸ್ ಮಾತನಾಡಿ ಸಲ್ಲಿಸಿದ ಮನವಿ ಸ್ವೀಕರಿಸಿದ ಡೀನ್ ಅವರು ಹಿಂದಿನ ಆಡಳಿತ ಮಂಡಳಿ ಜಮೀನು ನೀಡಿರುವ ಕುರಿತು ಕಾನೂನು ತಜ್ಞರ ಸಲಹೆ ಪಡೆದು ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದೆಂದರು.

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಎ.ನಳಿನಿ, ಜಿಲ್ಲಾ ಸಂಚಾಲಕ ಕೆ.ಶ್ರೀನಿವಾಸಗೌಡ, ಬಂಗವಾದಿ ನಾಗರಾಜಗೌಡ ಮತ್ತಿತರರಿದ್ದರು.

# ಜಾಲಪ್ಪ ಆಸ್ಪತ್ರೆಗೆ ನೀಡಿದ ಸರ್ಕಾರಿ ಜಮೀನು ಹಿಂಪಡೆಯಿರಿ

## ತೋಟಗಾರಿಕಾ ಮಹಾವಿದ್ಯಾಲಯದಲ್ಲಿ ರೈತ ಸಂಘದಿಂದ ಪ್ರತಿಭಟನೆ; ಡೀನ್‌ಗೆ ಮನವಿ



ಕೋಲಾರ: ತೋಟಗಾರಿಕಾ ಮಹಾವಿದ್ಯಾಲಯಕ್ಕೆ ಸೇರಿದ ಸರ್ಕಾರಿ ಜಮೀನನ್ನು ಖಾಸಗಿ ಮಾಲೀಕತ್ವದ ಜಾಲಪ್ಪ ಆಸ್ಪತ್ರೆಯ ಸ್ಥಾಪನೆಗೆ ನೀಡಿರುವ ಕಸಬಾ ಹೋಬಳಿ ನಡುಪಳ್ಳಿ ಸರ್ವೇ ನಂ.115ರಲ್ಲಿ 10 ಎಕರೆ ಜಮೀನನ್ನು ಕೂಡಲೇ ವಾಪಸ್ಸು ಪಡೆದು ರೈತರಿಗೆ, ಅನುಕೂಲವಾಗುವ ಪ್ರಯೋಗಿಕ ಬೆಳೆಗಳಿಗೆ ಅಥವಾ ಸರ್ಕಾರಿ ಕಟ್ಟಡಗಳಿಗೆ ಉಪಯೋಗಿಸಬೇಕೆಂದು ಒತ್ತಾಯಿಸಿ ರೈತ ಸಂಘದಿಂದ ಇಲಾಖೆ ಮುಂದೆ ಹೋರಾಟ ಮಾಡಿ, ಪ್ರಾಂಶುಪಾಲರು, ಡೀನ್ ಅವರಿಗೆ ಮನವಿ ನೀಡಿ ಒತ್ತಾಯಿಸಲಾಯಿತು.

ರೈತ ಸಂಘ ಉಪಾಧ್ಯಕ್ಷ ಕೆ.ನಾರಾಯಣಗೌಡ ಮಾತನಾಡಿ, ಕೃಷಿಯನ್ನೇ ನಂಬಿ ಜೀವನ ಮಾಡುತ್ತಿರುವ ಲಕ್ಷಾಂತರ ರೈತರು ಇಂದು ಸರ್ಕಾರಗಳ ಅವೈಜ್ಞಾನಿಕ ನೀತಿ, ಹಾಗೂ ಕಾರ್ಪೋರೇಟ್ ಕಂಪನಿಗಳ ರೈತ ವಿರೋಧಿ ಧೋರಣೆಯಿಂದ ಕೃಷಿ ಕ್ಷೇತ್ರ ದಿನೇ ದಿನೇ ನಶಿಸಿಹೋಗುತ್ತಿದೆ. ಕೃಷಿಯಿಂದ ರೈತರು ವಿಮುಕ್ತಿ ಹೊಂದಿ ಮುಂದಿನ ದಿನಗಳಲ್ಲಿ ತುತ್ತು ಅನ್ನಕ್ಕಾಗಿ ಹೊರ ದೇಶದ ಬಳಿ ಕೈಚಾಚ ನಿಲ್ಲುವ ಪರಿಸ್ಥಿತಿ ಇಲ್ಲವೆ ಔಷಧಿ ಕಂಪನಿಗಳು ತಯಾರು ಮಾಡುವ ಮಾತ್ರೆಗಳಿಗೆ ಮೊರ ಹೋಗಬೇಕಾದ ಕಾಲ ದೂರವಿಲ್ಲ ಎಂದರು.

ಜೈ ಜವಾನ್ ಜೈ ಕಿಸಾನ್ ಎಂಬ ಘೋಷಣೆಯೊಂದಿಗೆ ರೈತರನ್ನು ಸಂಪೂರ್ಣವಾಗಿ ಸರ್ವನಾಶ ಮಾಡಲು ಸರ್ಕಾರಗಳು ರೈತರ ಕೃಷಿ ಜಮೀನನ್ನು ಅಭಿವೃದ್ಧಿ ಹೆಸರಿನಲ್ಲಿ ವಶಪಡಿಸಿಕೊಳ್ಳುತ್ತಿದ್ದರೆ, ಮತ್ತೊಂದಡೆ ಸರ್ಕಾರದ ಜಮೀನುಗಳನ್ನು ಖಾಸಗಿ ಕಾರ್ಪೋರೇಟ್ ಕಂಪನಿಗಳಿಗೆ ನೀಡುತ್ತಿದ್ದಾರೆ. ಜಿಲ್ಲೆಯಲ್ಲಿ ರೈತರು ಬೆಳೆಯುವ ಬೆಳೆಗಳ ಪ್ರಾಯೋಗಿಕವಾಗಿ ಬೆಳೆಯಲು ಬಿತ್ತನೆ ಬೀಜ ಕಂಪನಿಗಳಿಗೆ ಅವಕಾಶ ನೀಡಿ ಔಷಧಿಗಳ ಬಗ್ಗೆ ರೈತರಿಗೆ ತರಬೇತಿ ನೀಡಬೇಕಾದ ಇಲಾಖೆಯ ಜಮೀನನ್ನೇ ಬಲಾಢ್ಯರಿಗೆ ನೀಡಿರುವುದು ಯಾವ ನ್ಯಾಯ ಎಂದು ಅಸಮದಾನ ವ್ಯಕ್ತಪಡಿಸಿದರು.

ಜಿಲ್ಲಾಧ್ಯಕ್ಷ ಮರಗಲ್ ಶ್ರೀನಿವಾಸ್ ಮಾತನಾಡಿ, ಜಾಲಪ್ಪ ಸಂಶೋಧನಾ ಕೇಂದ್ರ ಹಾಗೂ ಆಸ್ಪತ್ರೆ ನಿರ್ಮಾಣಕ್ಕೆ ನೀಡಿರುವ ಸರ್ಕಾರಿ ತೋಟಗಾರಿಕಾ ಜಮೀನ್ನು ಕೂಡಲೇ ಕಾನೂನು ಸಲಹೆ ಪಡೆದು, ಅದನ್ನು ಹಿಂಪಡೆದು, ರೈತರಿಗೆ ಅನುಕೂಲವಾಗುವ ಹಾಗೂ ರೈತರು ಬೆಳೆ ಬೆಳೆಯಲು ಕೊಡುವ ಬಿತ್ತನೆ ಬೀಜ ಕಂಪನಿಗಳಿಗೆ ಪ್ರಾಯೋಗಿಕ ಬೆಳೆ ಮಾಡಲು ನೀಡಿ, ಆ ಬೆಳೆಗಳಿಗೆ ಬರುವ ರೋಗಗಳ ಬಗ್ಗೆ ಔಷಧಿ ಕಂಪನಿಗಳನ್ನು ಕರೆಯಿಸಿ, ರೈತರಿಗೆ ಸಂಪರ್ಕವಾದ ಸೂಕ್ತವಾದ ತರಬೇತಿಯನು ನೀಡಲು ಉಪಯೋಗಿಸಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಮಹಾವಿದ್ಯಾಲಯದ ಡೀನ್ ಮಾತನಾಡಿ, ಹಿಂದಿನ ಆಡಳಿತ ಮಂಡಳಿ 'ಈ ರೀತಿ ಜಮೀನನ್ನು ಖಾಸಗಿಯವರಿಗೆ ನೀಡಿದ್ದಾರೆ. ಆದರೂ ಇದರ ವಿರುದ್ಧ ಕಾನೂನು ಪಂಡಿತರ ಸಲಹೆ ಪಡೆದು, ವಾಪಸ್ಸು ಪಡೆಯುವಂತೆ ಹಿರಿಯ ಅಧಿಕಾರಿಗಳ ಗಮನಕ್ಕೆ ತರುವ ಭರವಸೆ ನೀಡಿದರು.

ಜಿಲ್ಲಾಧ್ಯಕ್ಷೆ ಎ.ನಳಿನಿ, ಜಿಲ್ಲಾ ಸಂಚಾಲಕ ಕೆ.ಶ್ರೀನಿವಾಸಗೌಡ, ಜಿಲ್ಲಾಧ್ಯಕ್ಷ ಮರಗಲ್ ಶ್ರೀನಿವಾಸ್, ಬಂಗವಾದಿ ನಾಗರಾಜಗೌಡ, ಕ್ಯಾಸಂಬಳ್ಳಿ ಪ್ರತಾಪ್, ವಡ್ಡಹಳ್ಳಿ ಮಂಜುನಾಥ್, ತೆರ್ನಹಳ್ಳಿ ಆಂಜಿನಪ್ಪ, ಮಾಲೂರು ತಾಲ್ಲೂಕು ಅಧ್ಯಕ್ಷ ಹೊಸಹಳ್ಳಿ ವೆಂಕಟೇಶ್, ಐತಂಡಹಳ್ಳಿ ಅಂಬರೀಶ್, ಉದಯ್, ಮಂಜುನಾಥ್, ಮೀಸೆ ವೆಂಕಟೇಶಪ್ಪ, ತೆರ್ನಹಳ್ಳಿ ವೆಂಕಿ, ಸಹದೇವಣ್ಣ, ಮಂಗಸಂದ್ರ ನಾಗೇಶ್, ತಿಮ್ಮಣ್ಣ, ವೆಂಕಟೇಶಪ್ಪ, ಪ್ರಸನ್ನಕುಮಾರ್, ಸಂತೋಷ್, ಪುರುಶೋತ್ತಮ್, ಹರೀಶ್, ಯಲ್ಲಪ್ಪ, ನಿರಂಜನ್ ಮುಂತಾದವರಿದ್ದರು.